**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್** 1096/2019

**ಸಿ ಡಬ್ಲ್ಯೂ** - 3
**ಪಿ ಡಬ್ಲ್ಯೂ** - 2

**ಸಾಕ್ಷಿಯ ಹೆಸರು** - **ಶಾಂತಕುಮಾರ**
**ತಂದೆಯ ಹೆಸರು** - **ಬಿ ಸಿ ಓಬಳೇಶ**
**ವಯಸ್ಸು** - 41 **ವರ್ಷಗಳು**
**ಉದ್ಯೋಗ** - **ಗ್ಯಾಸ್ ಕಂಪಿನಿಯಲ್ಲಿ ಕೆಲಸ**
**ವಾಸಸ್ಥಳ** - **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ** 18-07-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ **2**(ಬಿ) ಎಂದು ಗುರುತಿಸಲಾಯಿತು.

ಈಗ ನಾನು ನೋಡುತ್ತಿರುವ **4** ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ಈಗಾಗಲೇ ನಿಪಿಃ **3** ಎಂದು ಗುರುತಿಸಲಾಗಿದೆ.

ಸದರಿ ಸಹಿಗಳನ್ನು ಹೊಸಪೇಟೆಯ ಬಿ ಡಿ ಸಿ ಸಿ ಬ್ಯಾಂಕ್ ನಲ್ಲಿ ಸ್ವಂತ ಕೆಲಸಕ್ಕೆ ಹೋದಾಗ **6-7** ವರ್ಷಗಳ ಹಿಂದೆ ಮಾಡಿರುತ್ತೇನೆ. ನಿಪಿಃ **2** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ನನ್ನೊಂದಿಗೆ ಬೇರೆ ಯಾರು ಇದ್ದರು ಎಂದು ನನಗೆ ಗೊತ್ತಿಲ್ಲ.

**CC 1096/2019**

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 27-03-2019 ರಂದು ಸಂಜೆ 05.00 ರಿಂದ 05.45 ರವರೆಗೆ ಸದರಿ ಪಂಚನಾಮೆಯನ್ನು ಮಾಡಲಾಯಿತು ಅಂದರೆ ನನಗೆ ಗೊತ್ತಿಲ್ಲ. ನನ್ನೊಂದಿಗೆ ಚಾಸಾ -1, 2 ಮತ್ತು ತನಿಖಾಧಿಕಾರಿಗಳು ಸ್ಥಳದಲ್ಲಿ ಹಾಜರು ಇದ್ದರು ಅಂದರೆ ಸರಿಯಲ್ಲ. ನಿಪಿಃ 2 ಕ್ಕೆ ಪಂಚನಾಮೆ ಕಾಲದಲ್ಲಿ ಸ್ಥಳದಲ್ಲಿ ಹಾಜರು ಇದ್ದು ಸಹಿ ಮಾಡಿದ್ದರೂ ಸಹ, ಪಂಚನಾಮೆಯ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎಂ ಕೆ., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.